

ಅರುಣ ಪಿ. ಭಟ್ಟ

## ವಾರಭವಿಷ್ಯ 28.07.2022ರಿಂದ 03.08.2022ರವರೆಗೆ




ಆರಂಭದ ಎರಡು ದಿನದಲ್ಲಿ ಕಾರ್ಯಸಿದ್ಧಿ. ಬಂಧುಗಳ ಆಗಮನದಿಂದ ಕುಟುಂಬದಲ್ಲಿ ಸಂತಸ. ಉದ್ಯೋಗ ಹುಡುಕುತ್ತಿರುವವರಿಗೆ ಉದ್ಯೋಗ ಪ್ರಾಪ್ತಿ. ಮನೆ ಬಾಡಿಗೆಯಿಂದ ಧನಲಾಭ. ರಾಜಕೀಯದವರಿಗೆ ಕೈ ತಪ್ಪಿ ಹೋಗುವ ಅಧಿಕಾರ ಪ್ರಾಪ್ತಿ. ಗ್ರಂಥರಚನೆಯಲ್ಲಿ ಆಸಕ್ತಿ. ವಾಹನ ಸೌಖ್ಯ. ಮಕ್ಕಳಿಂದ ಮಾನಸಿಕ ಕಿರಿಕಿರಿ. ವಿದ್ಯಾರ್ಥಿಗಳಿಗೆ ಶುಭವಾರ. ಶುಭದಿನ 01. ಶ್ರೀ ಲಕ್ಷ್ಮೀನರಸಿಂಹ ಪಂಚರತ್ನ ಓದಿರಿ.




ವಾರದ ಪ್ರಾರಂಭದಲ್ಲಿ ಚಿಕ್ಕ ಪ್ರವಾಸ. ಸಹೋದರಿಯರಿಂದ ಶುಭವಾರ್ತೆ. ಹಸ್ತಾಲಂಕಾರ ವಸ್ತು ಖರಿದಿ. ವಾರದ ಮಧ್ಯದಲ್ಲಿ ಜ್ವರ ಪೀಡೆ ವೈದ್ಯಕೀಯ ಖರ್ಚು. ಕೋರ್ಟ್ ಪ್ರಕಣದಲ್ಲಿ ಗೆಲುವು ಸಾಧ್ಯತೆ. ಅವಮಾನಕರ ಪ್ರಸಂಗ. ವಿವಾಹ ಪ್ರಸ್ತಾವದಲ್ಲಿ ಯಶಸ್ಸು. ವಾರಾಂತ್ಯದಲ್ಲಿ ಪರೋಪಕಾರ. ನಟನಾ ವೃತ್ತಿಯಲ್ಲಿ ಇರುವವರಿಗೆ ವಿಶೇಷ ಅವಕಾಶ. ಶುಭದಿನ 03. ಈಶ್ವರನಿಗೆ ತಿಲಾರ್ಚನೆ ಮಾಡಿರಿ.




ದೈಹಿಕ ಜಾಡ್ಯ ಅಲರ್ಜಿ. ವಿನಾಕಾರಣ ಹೆದರಿಕೆ. ಆದರೆ ಬಹುದಿನಗಳ ನಂತರ ಕುಟುಂಬದಲ್ಲಿ ಸಂತೋಷದ ಸಮಾರಂಭ. ಕಲಾವಿದರು ಮತ್ತು ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಯಶಸ್ಸು. ವಾಗ್ಮಿಗಳಿಂದ ಉತ್ತಮ ಭಾಷಣ ಪ್ರದರ್ಶನ. ಕಲಾವಿದರಿಗೆ ಮಾನ ಸನ್ಮಾನ. ಮೂತ್ರಜನಕಾಂಗ ಪೀಡೆ ಸಾಧ್ಯತೆ. ಉದ್ಯೋಗಿಗಳಿಗೆ ನಿರೀಕ್ಷಿತ ಯಶಸ್ಸು ಸಿಗದಿರಬಹುದು. ಶುಭದಿನ 29. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.




ವಾರದ ಪ್ರಾರಂಭದಲ್ಲಿ ಮನೆಕಟ್ಟುವ ಸಮಸ್ಯೆ ಬಗೆಹರಿಯುವುದು. ಕ್ರಯ ವಿಕ್ರಯದಲ್ಲಿ ವಂಚನೆ ನಡೆಯುವ ಸಂಭವ ಇದೆ ಜಾಗ್ರತೆ. ವಾರವಿಡಿ ಒಂದಿಲ್ಲೊಂದು ವಿವಾದದಲ್ಲಿ ಸಿಲುಕುವಿರಿ. ತಂದೆಯಿಂದ ಹಣಕಾಸಿನ ಸಹಾಯ ಸಾಧ್ಯತೆ. ಕಾಲಿಗೆ ನೋವು. ಆಸ್ಪತ್ರೆಗೆ ಖರ್ಚು. ನಿರೀಕ್ಷಿತ ಸ್ಪರ್ಧೆಯಲ್ಲಿ ಯಶಸ್ಸು. ಸಾರ್ವಜನಿಕ ಜೀವನದಲ್ಲಿ ಇರುವವರಿಗೆ ವಿಶೇಷ ಮನ್ನಣೆ. ಶುಭದಿನ 02. ಗುರುದತ್ತಾತ್ರೆಯ ಆರಾಧನೆ ಮಾಡಿರಿ.




ಮಾನಸಿಕ ಉತ್ಸಾಹ ವೃದ್ಧಿಸುವುದು. ಸರಕಾರಿ ಕೆಲಸಗಳು ತ್ವರಿತ ಗತಿಯಲ್ಲಿ ನಡೆಯುವುದು. ಕೆಲವು ವಿಷಯದಲ್ಲಿ ಮಿತ್ರರಿಂದ ವಿರೋಧ ಕಾಣಿಸುವುದು. ಕೃಷಿ ಉತ್ಪನ್ನ ವಿಕ್ರಿಯದಾರರಿಗೆ ಲಾಭ. ಹೊಟ್ಟೆನೋವಿನ ಪ್ರಸಂಗ. ಅಜ್ಞಾತವಾಸದಿಂದ ಬಿಡುಗಡೆ. ಮಹತ್ವದ ಮಾತುಕತೆ. ಮನೆಯಲ್ಲಿ ಧಾರ್ಮಿಕ ಕಾರ್ಯ ನಡೆಸುವಿರಿ. ಸರಕಾರಿ ಉದ್ಯೋಗಿಗಳಿಗೆ ಮುಂಬಡ್ತಿ ಸಾಧ್ಯತೆ. ಶುಭದಿನ 30. ಹನುಮಾನ್ ಚಾಲೀಸ್ ಪಠಿಸಿರಿ.




ಅನಿರೀಕ್ಷಿತ ಖರ್ಚಿನ ಪ್ರಸಂಗ. ಸರಕಾರಿ ಕೆಲಸದಲ್ಲಿ ವ್ಯತ್ಯಯ. ಸೇವಕರಿಂದ ಹಾನಿ, ತೊಂದರೆ. ಬಂಧುಗಳಿಗೆ ಆಪತ್ತು. ಮನೆಗೆಲಸ ಅರ್ಧಕ್ಕೆ ನಿಲ್ಲುವುದು. ಪ್ರೇಮ ಪ್ರಸಂಗಗಳಲ್ಲಿ ಭಗ್ನತೆ. ಅಧಿಕಾರಿಗಳಿಗೆ ಹಿನ್ನಡೆ. ವ್ಯಾಪಾರ ವ್ಯವಹಾರಸ್ಥರಿಗೆ ಮಧ್ಯಮ ಫಲ. ಅವಿವಾಹಿತರಿಗೆ ವಿವಾಹ ಭಾಗ್ಯದ ಸೂಚನೆ. ವಾರಾಂತ್ಯದಲ್ಲಿ ಮನೆಯ ಆರ್ಥಿಕ ವ್ಯವಸ್ಥೆ ಉತ್ತಮಗೊಳ್ಳುವುದು. ಶುಭದಿನ 02. ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.




ವಾರದಲ್ಲಿಯೇ ಉತ್ತಮ ಫಲ ಪ್ರಾಪ್ತಿಯ ರಾಶಿ. ಆಕಸ್ಮಿಕ ಧನಲಾಭ. ನಿರುದ್ಯೋಗಿಗಳಿಗೆ ಉದ್ಯೋಗ ಸಿಗುವುದು. ವಿವಾಹಾಪೇಕ್ಷಿಗಳಿಗೆ ಸಂಗಾತಿ ಲಭ್ಯ. ಈ ಹಿಂದಿನ ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ಅವುಗಳು ನಿವಾರಣೆ ಆಗುತ್ತವೆ. ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ ಇದೆ. ಮನೆಗೆಲಸದ ಹೊಸ ಸೇವಕರು ಸಿಗುವರು. ವ್ಯಾಪಾರಗಳಿಗೆ ಲಾಭ. ಶುಭದಿನ 31. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಕಷ್ಟದಲ್ಲೂ ಇಷ್ಟ ಫಲ ಪ್ರಾಪ್ತಿಯಾಗುವುದು. ಪರದೇಶ ಪ್ರವಾಸಕ್ಕೆ ಸಿದ್ಧತೆ. ಸರಕಾರಿ ಅಧಿಕಾರ ಪ್ರಾಪ್ತಿಯೋಗ. ಶಿಕ್ಷಕರಿಗೆ ಪದೋನ್ನತಿಯೊಡನೆ ವರ್ಗಾವಣೆ ಸಂಭವ. ಕುಟುಂಬ ವರ್ಗದಲ್ಲಿ ಅನಾರೋಗ್ಯ ಪ್ರಾಣಾಪಾಯ ಭೀತಿ. ಮನೆಗೆ ಬಂಧುಮಿತ್ರರ ಆಗಮನ. ಭೂಮಿ ಕ್ರಯ ವಿಕ್ರಯಕ್ಕೆ ಸಕಾಲ. ಬಟ್ಟೆ, ಪುಸ್ತಕ ಆಹಾರ ಪದಾರ್ಥಗಳ ವ್ಯವಹಾರಸ್ಥರಿಗೆ ಉತ್ತಮ ಲಾಭ. ಶುಭದಿನ 02. ದುರ್ಗಾ ಆರಾಧನೆ ಮಾಡಿರಿ.




ಆರೋಗ್ಯದಲ್ಲಿ ಏರುಪೇರು. ಹೆಂಡತಿಯೊಡನೆ ಜಗಳ. ಕಚೇರಿ ಕಾಗದ ಪತ್ರಗಳು ಕಾಣೆ ಆಗಬಹುದು. ಸಹೋದ್ಯೋಗಿಗಳ ಜತೆ ಮುಖ್ಯವಾದ ಚರ್ಚೆ ನಡೆಸಲಿದ್ದೀರಿ. ಅಲರ್ಜಿ ಸೋಂಕು ಕಾಡುವ ಸಾಧ್ಯತೆ ಇದೆ. ಆರೋಗ್ಯ ಕ್ಷೀಣಿಸಬಹುದು. ವಾರದ ಮಧ್ಯಭಾಗದಲ್ಲಿ ಉದ್ಯೋಗ ಸ್ಥಳದಲ್ಲಿ ನಿರೀಕ್ಷಿತ ಯಶಸ್ಸು ಸಾಧಿಸಲಿದ್ದೀರಿ. ಸ್ಪರ್ಧಾತ್ಮಕ ಪರೀಕ್ಷೆಗಳ ಉತ್ತಮ ಫಲಿತಾಂಶ. ಶುಭದಿನ 03. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾಹನ ಚಲಾಯಿಸುವಾಗ ಎಚ್ಚರವಿರಲಿ. ಆಕಸ್ಮಿಕ ಅಪಘಾತ ಭಯ. ಕೌಟುಂಬಿಕ ಖರ್ಚು ಜಾಸ್ತಿಯಾಗುವುದು. ಶತ್ರುಗಳು ತಲೆ ತಗ್ಗಿಸುವರು. ಹಳೆಯ ಮಿತ್ರರ ಆಗಮನ. ವಾರದ ಮಧ್ಯಭಾಗದಲ್ಲಿ ಆದಾಯ ಹೆಚ್ಚಳ ಆಗುತ್ತಾ ಹೋಗುತ್ತದೆ. ಆ ಮೂಲಕ ಜೀವನ ಶೈಲಿ ಹಾಗೂ ಜೀವನ ಮಟ್ಟ ಉತ್ತಮಗೊಳ್ಳಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಶುಭದಿನ 31. ನವಗ್ರಹ ಸ್ತೋತ್ರ ಮಾಡಿರಿ.




ಪ್ರಾರಂಭದಿಂದಲೂ ಶುಭಯೋಗ. ಯಾಂತ್ರಿಕ ವಸ್ತುಗಳ ಖರೀದಿ. ಬ್ಯಾಂಕ್ ನೌಕರರಿಗೆ ವರ್ಗಾವಣೆ ಸಂಭವ. ಕೈಗೊಂಡ ಕೆಲಸಗಳಲ್ಲಿ ನೀರಿಕ್ಷೆಗಿಂತ ಲಾಭ. ಗುತ್ತಿಗೆದಾರರು ಉತ್ತಮ ಧನ ಲಾಭ ಕಾಣುವಿರಿ. ಓದಿನಲ್ಲಿ ನಿಮ್ಮ ಏಕಾಗ್ರತೆ ಹೆಚ್ಚಳವಾಗಲಿದೆ. ವೈಯಕ್ತಿಕ ಬಾಂಧವ್ಯ ಗಟ್ಟಿಯಾಗಲಿದೆ. ವ್ಯವಹಾರಸ್ಥರಿಗೆ ಹೊಸ ಅವಕಾಶಗಳು ದೊರೆಯಲಿವೆ. ಶುಭದಿನ 01. ನವನಾಗ ಪೂಜೆ ಕ್ಷೀರಾಭಿಷೇಕ ಮಾಡಿರಿ.




ವಿನಾಕಾರಣ ಮಿತ್ರರು ಶತ್ರುಗಳಾಗುವರು. ಮೇಲಧಿಕಾರಿಗಳಿಂದ ಭಯದ ನೋಟೀಸ್ ಬರಬಹುದು. ಕಲಾವಿದರಿಗೆ ಸಂಗೀತಗಾರರಿಗೆ ವಾರದ ಮೊದಲರ್ಧ ಉತ್ತಮ. ಮಕ್ಕಳ ಆರೋಗ್ಯದಲ್ಲಿ ಕೊಂಚ ಪ್ರಗತಿ. ವಿದ್ಯಾರ್ಥಿಗಳಿಗೆ ಅಭ್ಯಾಸದಲ್ಲಿ ಹಿನ್ನಡೆ. ವಾಹನ ಚಾಲಕರಿಗೆ ಎಚ್ಚರ ಅಗತ್ಯ. ಕಾನೂನು ಕೋರ್ಟ್ ವ್ಯವಹಾರಗಳಲ್ಲಿ ಅಪಜಯ. ಕೆಟ್ಟ ಜನರಿಂದ ಧನಪ್ರಾಪ್ತಿ. ಶುಭದಿನ 01. ಆದಿತ್ಯ ಹೃದಯ ಏಳು ಸಾರಿ ಪಠಿಸಿರಿ.